**ಹಿರಿಯ ದಿವಾಣಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ತಿ. ನರಸೀಪುರ**

**ಸಿಸಿ ಸಂಖ್ಯೆ: 69/2018**

ಚಾ.ಸಾ-04, ಫ್ರಾ.ಸಾ-02

| | | |
|---|---|---|
| ಹೆಸರು | : | ಮಹದೇವಮೂರ್ತಿ |
| ತಂದೆಯ ಹೆಸರು | : | ಲೇಟ್ ಕೆಂಪಯ್ಯ |
| ವಯಸ್ಸು | : | 65 |
| ವೃತ್ತಿ | : | ಕೂಲಿ ಕೆಲಸ |
| ವಾಸ | : | ಕಾರ್ಗಳ್ಳಿ ಗ್ರಾಮ, ತಿ. ನರಸೀಪುರ ತಾಲ್ಲೂಕು |

**ದಿನಾಂಕ 01.03.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ನನಗೆ ಘಟನೆಯ ಕುರಿತು ಮಾಹಿತಿ ಇಲ್ಲ. ಫ್ರಾಸಾ-1 ಮತ್ತು ಆರೋಪಿತರ ಪರಿಚಯವಿದೆ. ನಾನು ಘಟನೆಯನ್ನು ನೋಡಿಲ್ಲ. ಪೊಲೀಸರಿಗೆ ಹೇಳಿಕೆ ನೀಡಿಲ್ಲ. ನನ್ನ ಸಮಕ್ಷಮ ಪಂಚನಾಮ ಜರುಗಿಸಿಲ್ಲ. ಏನನ್ನೂ ಜಪ್ತಿಪಡಿಸಿಲ್ಲ.

ನನಗೆ ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದ್ದು, ಸಾಕ್ಷಿಯ ಸಹಿ ಇರುವ ದಾಖಲೆಯು ಪಂಚನಾಮವಾಗಿದ್ದು, ಅದನ್ನು ನಿಪಿ.4 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.4(ಎ) ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

ಸಿಸಿ ಸಂಖ್ಯೆ: 69/2018

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 05.06.2017 ರಂದು ಮಧ್ಯಾಹ್ನ 2.30 ಗಂಟೆ ಸಮಯದಲ್ಲಿ ತಿ. ನರಸೀಪುರ ತಾಲ್ಲೂಕಿನ ನಮ್ಮ ಗ್ರಾಮದ ಸರ್ವೆ ನಂ.38 ಕ್ಕೆ ಪ್ರಾಸಾ-1 ರವರು ಬೋರ್‌ವೆಲ್‌ಗೆ ನೀರು ಕೇಳಲು ಹೋದಾಗ ಆರೋಪಿತರು ಆಕೆಯೊಂದಿಗೆ ಗಲಾಟೆ ಮಾಡಿ, ಅವಾಚ್ಯ ಶಬ್ದಗಳಿಂದ ಬೈದು, ದೊಣ್ಣೆಯಿಂದ ಆಕೆಯ ಎಡಭುಜಕ್ಕೆ ಹೊಡೆದು, ಕಾಲುಗಳಿಂದ ಆಕೆಯ ಮೈಕೈ ತುಳಿದು, ಆಕೆಯ ತಲೆ ಕೂದಲನ್ನು ಹಿಡಿದು ಎಳೆದಾಡಿ ಅವಮಾನಪಡಿಸಿ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 06.05.2017 ರಂದು ಘಟನಾ ಸ್ಥಳದಲ್ಲಿ ಪೊಲೀಸರು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಪಂಚನಾಮವನ್ನು ನಿ.ಪಿ.4 ರಂತೆ ಮಧ್ಯಾಹ್ನ 3.00 ರಿಂದ 3.45 ಗಂಟೆ ಸಮಯದಲ್ಲಿ ಜರುಗಿಸಿ ದೊಣ್ಣೆಯನ್ನು ಜಪ್ತಿಪಡಿಸಿದರು ಎಂದರೆ ಸರಿಯಲ್ಲ.

ಅದೇ ದಿನ ಪೊಲೀಸರಿಗೆ ಘಟನೆಯ ಕುರಿತು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅದನ್ನು ತಿರಸ್ಕರಿಸಿದ್ದರಿಂದ ಅದನ್ನು ನಿಪಿ.5 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)

ಓ ಹೇ ಕೇ ಸರಿ ಇದೆ

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ತಿ.ನರಸೀಪುರ**

**ಹಿರಿಯ ದಿವಾಣಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ತಿ. ನರಸೀಪುರ**

**ಸಿಸಿ ಸಂಖ್ಯೆ: 69/2018**

ಚಾ.ಸಾ–05, ಪ್ರಾ.ಸಾ–03

| | | |
|---|---|---|
| ಹೆಸರು | : | ಕೆಂಚ |
| ತಂದೆಯ ಹೆಸರು | : | ಲೇಟ್ ಪಿಳ್ಳಮಾದಯ್ಯ |
| ವಯಸ್ಸು | : | 30 |
| ವೃತ್ತಿ | : | ವ್ಯವಸಾಯ |
| ವಾಸ | : | ಕಾರ್ಗಳ್ಳಿ ಗ್ರಾಮ, ತಿ. ನರಸೀಪುರ ತಾಲ್ಲೂಕು |

**ದಿನಾಂಕ 01.03.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ನನಗೆ ಘಟನೆಯ ಕುರಿತು ಮಾಹಿತಿ ಇಲ್ಲ. ಪ್ರಾಸಾ–1 ಮತ್ತು ಆರೋಪಿತರ ಪರಿಚಯವಿದೆ. ನಾನು ಘಟನೆಯನ್ನು ನೋಡಿಲ್ಲ. ಪೊಲೀಸರಿಗೆ ಹೇಳಿಕೆ ನೀಡಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 05.06.2017 ರಂದು ಮಧ್ಯಾಹ್ನ 2.30 ಗಂಟೆ ಸಮಯದಲ್ಲಿ ತಿ. ನರಸೀಪುರ ತಾಲ್ಲೂಕಿನ ನಮ್ಮ ಗ್ರಾಮದ ಸರ್ವೆ ನಂ.38 ಕ್ಕೆ ಪ್ರಾಸಾ–1 ರವರು ಬೋರ್‌ವೆಲ್‌ಗೆ ನೀರು ಕೇಳಲು ಹೋದಾಗ ಆರೋಪಿತರು ಆಕೆಯೊಂದಿಗೆ ಗಲಾಟೆ ಮಾಡಿ, ಅವಾಚ್ಯ ಶಬ್ದಗಳಿಂದ ಬೈದು, ದೊಣ್ಣೆಯಿಂದ

ಆಕೆಯ ಎಡಭುಜಕ್ಕೆ ಹೊಡೆದು, ಕಾಲುಗಳಿಂದ ಆಕೆಯ ಮೈಕೈ ತುಳಿದು, ಆಕೆಯ ತಲೆ ಕೂದಲನ್ನು ಹಿಡಿದು ಎಳೆದಾಡಿ ಅವಮಾನಪಡಿಸಿ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 06.05.2017 ರಂದು ಪೊಲೀಸರಿಗೆ ಘಟನೆಯ ಕುರಿತು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅದನ್ನು ತಿರಸ್ಕರಿಸಿದ್ದರಿಂದ ಅದನ್ನು ನಿಪಿ.6 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)
ಓ ಹೇ ಕೇ ಸರಿ ಇದೆ

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ,**
**ತಿ.ನರಸೀಪುರ**